(ಧರಣಿ ನಿರತ ಕಾಂಗ್ರೆಸ್ ಮತ್ತು ಜೆ.ಡಿ.(ಎಸ್)ಸದಸ್ಯರು ಸದನದ ಬಾವಿಯೊಳಗಿಂದ ಕಲಾಪದುದ್ದಕ್ಕೂ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)

5 ಶಾಸನ ರಚನೆ:

(i) ವಿಧೇಯಕಗಳನ್ನು ಮಂಡಿಸುವುದು:

(ಅ) ಕರ್ನಾಟಕ ಧನವಿನಿಯೋಗ(ಸಂಖ್ಯೆ 2) ವಿಧೇಯಕ, 2010 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 2) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ-II)

(ಆ) ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕ, 2010 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.